# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 954 |
| ಮಾನ್ಯ ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 22.02.2024 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ 2 ವರ್ಷಗಳ ಅವಧಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಯಲ್ಲಿ ಎಷ್ಟು ಅಕ್ರಮ ಮದ್ಯ ಮಾರಾಟ ಪ್ರಕರಣಗಳು ದಾಖಲಾಗಿವೆ; (ವಿವರ ಒದಗಿಸುವುದು) | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಅಕ್ರಮ ಮದ್ಯ ಮಾರಾಟ ಸಂಬಂಧ ಕಳೆದ ಎರಡು ವರ್ಷಗಳಲ್ಲಿ ಅಂದರೆ 2021-22 ರಿಂದ 2022-23ನೇ ಅಬಕಾರಿ ಸಾಲುಗಳಲ್ಲಿ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 32, 34 ರಡಿ ಒಟ್ಟು 2,124 ಘೋರ ಪ್ರಕರಣಗಳನ್ನು ಮತ್ತು 15(ಎ) ರನ್ವಯ ಒಟ್ಟು 13,926 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಜಿಲ್ಲಾವಾರು ದಾಖಲಿಸಿದ ಮೊಕದ್ದಮೆಗಳ ವಿವರ ಕೆಳಕಂಡಂತಿದೆ. |

| ಕ್ರಸಂ | ಕಲ್ಯಾಣ ಕರ್ನಾಟಕ ಜಿಲ್ಲೆಗಳು | ದಾಖಲಿಸಿದ ಪ್ರಕರಣಗಳ ಸಂಖ್ಯೆ | | |
|---|---|---|---|---|
| | | ಕ.ಅ.ಕಾಯ್ದೆ 1965 ರ ಕಲಂ 32,34 | ಕ.ಅ.ಕಾಯ್ದೆ 1965ರ ಕಲಂ 15(ಎ) | ಒಟ್ಟು |
| 1. | ಬೀದರ್ | 315 | 2220 | 2535 |
| 2. | ಕಲ್ಬುರ್ಗಿ | 496 | 3118 | 3614 |
| 3. | ಯಾದಗಿರಿ | 346 | 1455 | 1801 |
| 4. | ರಾಯಚೂರು | 436 | 1997 | 2433 |
| 5. | ಕೊಪ್ಪಳ | 143 | 1559 | 1702 |
| 6. | ಬಳ್ಳಾರಿ | 387 | 3537 | 3924 |
| 7. | ವಿಜಯನಗರ | 01 | 40 | 41 |
| | **ಒಟ್ಟು** | **2,124** | **13,926** | **16,050** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ | ಇಲ್ಲಿಯವರೆಗೆ ಎಷ್ಟು ಮೌಲ್ಯದ ಅಕ್ರಮ ಮದ್ಯ ವಶಕ್ಕೆ ಪಡೆಯಲಾಗಿದೆ ಹಾಗೂ ಇಲ್ಲಿಯವರೆಗೆ ಎಷ್ಟು ಜನರ | ಅಕ್ರಮ ಮದ್ಯ ಮಾರಾಟದ ಪ್ರಕರಣಗಳಿಂದ 24.28 ಕೋಟಿ ರೂಪಾಯಿಗಳ ಮೌಲ್ಯದ ವಸ್ತುಗಳನ್ನು ಜಪ್ತುಪಡಿಸಲಾಗಿದೆ ಹಾಗೂ ಈ ಸಂಬಂಧ 28,200 ಆರೋಪಿತರ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಜಿಲ್ಲಾವಾರು ವಿವರ ಕೆಳಕಂಡಂತಿದೆ. |

<table>
<tr>
<td></td>
<td>ವಿರುದ್ಧ ಪ್ರಕರಣ ದಾಖಲಾಗಿವೆ; (ಜಿಲ್ಲಾವಾರು ವಿವರ ನೀಡುವುದು)</td>
<td>
<table>
<tr><th>ಕ್ರ.ಸಂ</th><th>ಕಲ್ಯಾಣ ಕರ್ನಾಟಕ ಜಿಲ್ಲೆಗಳು</th><th>ಜಪ್ತುಪಡಿಸಿದ ವಸ್ತುಗಳ ಮೌಲ್ಯ (ಕೋಟಿ ರೂ.ಗಳಲ್ಲಿ)</th><th>ಆರೋಪಿತರ ಸಂಖ್ಯೆ</th></tr>
<tr><td>1.</td><td>ಬೀದರ್</td><td>3.33</td><td>4227</td></tr>
<tr><td>2.</td><td>ಕಲ್ಬುರ್ಗಿ</td><td>3.67</td><td>5526</td></tr>
<tr><td>3.</td><td>ಯಾದಗಿರಿ</td><td>4.87</td><td>2712</td></tr>
<tr><td>4.</td><td>ರಾಯಚೂರು</td><td>4.89</td><td>4770</td></tr>
<tr><td>5.</td><td>ಕೊಪ್ಪಳ</td><td>1.49</td><td>3743</td></tr>
<tr><td>6.</td><td>ಬಳ್ಳಾರಿ</td><td>2.88</td><td>7101</td></tr>
<tr><td>7.</td><td>ವಿಜಯನಗರ</td><td>3.15</td><td>121</td></tr>
<tr><td colspan="2">ಒಟ್ಟು</td><td>24.28</td><td>28200</td></tr>
</table>
</td>
</tr>
<tr>
<td>ಇ</td>
<td>ರಾಜ್ಯದಲ್ಲಿ ಎಷ್ಟು ವಿವಿಧ ಮದ್ಯದಂಗಡಿಗಳಿಗೆ ಪರವಾನಿಗೆಗಳನ್ನು ನೀಡಲಾಗುತ್ತಿದೆ; ಈ ಪರವಾನಿಗೆ ಪಡೆಯಲು ಇರುವ ಮಾನದಂಡಗಳೇನು?</td>
<td>1992ನೇ ಸಾಲಿನಿಂದ ಹೊಸದಾಗಿ ಸಿಎಲ್-2 ಹಾಗೂ ಸಿಎಲ್-9 ಸನ್ನದನ್ನು ನೀಡಲು ಸರ್ಕಾರ ನಿರ್ಬಂಧಿಸಿರುವುದರಿಂದ ಅಬಕಾರಿ ಇಲಾಖೆಯಿಂದ ಹೊಸದಾಗಿ ಸಿಎಲ್-2 ಮತ್ತು ಸಿಎಲ್-9 ಸನ್ನದುಗಳ ಮಂಜೂರಾತಿ ನೀಡಲಾಗುತ್ತಿಲ್ಲ.<br><br>ಪ್ರಸ್ತುತ, ಸಿಎಲ್-4, ಸಿಎಲ್-6ಎ, ಸಿಎಲ್-7, ಸಿಎಲ್-8, ಸಿಎಲ್-7ಎ, ಸಿಎಲ್-11ಸಿ, ಫಾರ್ಮ್ ಸಿಎಲ್-16, ಫಾರ್ಮ್ ಸಿಎಲ್-17 ಮತ್ತು ಫಾರ್ಮ್ ಸಿಎಲ್-18 ಸನ್ನದುಗಳನ್ನು ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯಗಳ ಮಾರಾಟ) ನಿಯಮಗಳು, 1968ರ ನಿಯಮ 3 ಮತ್ತು 5ರಡಿ ಹೊಸದಾಗಿ ಮಂಜೂರು ಮಾಡಲಾಗುತ್ತಿದೆ. ಸದರಿ ಸನ್ನದುಗಳಿಗೆ ಸಂಬಂಧಪಟ್ಟಂತೆ ಕರ್ನಾಟಕ ಅಬಕಾರಿ (ಭಾರತೀಯ ಮತ್ತು ವಿದೇಶಿ ಮದ್ಯ ಮಾರಾಟ) ನಿಯಮಗಳು 1968 ರ ನಿಯಮ 8, 8(ಎ) ರಲ್ಲಿ ನಿಗದಿಪಡಿಸಿರುವ ಸನ್ನದು ಶುಲ್ಕ ಮತ್ತು ಹೆಚ್ಚುವರಿ ಸನ್ನದು ಶುಲ್ಕಗಳನ್ನು ಅರ್ಜಿದಾರರಿಂದ ಪಾವತಿಸಿಕೊಂಡು ಅರ್ಜಿ ಪಡೆಯಲಾಗುತ್ತದೆ. ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ-5 ರನ್ವಯ ಉದ್ದೇಶಿತ ಸನ್ನದಿನ 100 ಮೀಟರ್ ಅಂತರದೊಳಗೆ ಯಾವುದೇ ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಆಸ್ಪತ್ರೆಗಳು (30 ಬೆಡ್‌ಗಳನ್ನು ಹೊಂದಿರುವ ಆಸ್ಪತ್ರೆಗಳು) ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಕಾಲೋನಿಗಳು</td>
</tr>
</table>

| | | |
|---|---|---|
| | | ಇರುವಂತಿಲ್ಲ. ಯಾವುದೇ ರಾಜ್ಯ ಸರ್ಕಾರದ / ಕೇಂದ್ರ ಸರ್ಕಾರದ ಕಛೇರಿಯಾಗಲೀ ಅಥವಾ ಸ್ಥಳೀಯ ಸಂಸ್ಥೆಗಳ ಕಛೇರಿಯಾಗಲೀ ಅವುಗಳ ಮುಖ್ಯಸ್ಥರು ಗ್ರೂಪ್ "ಎ" ಅಥವಾ ಗ್ರೂಪ್ "ಬಿ" ಅಧಿಕಾರಿಯಾಗಿದ್ದಲ್ಲಿ ಆ ಕಛೇರಿಯು ಆಕ್ಷೇಪಣಾ ಸ್ಥಳವೆಂದು ಪರಿಗಣಿಸಲ್ಪಡುತ್ತದೆ.<br><br>ಮಾನ್ಯ ಸರ್ವೋಚ್ಛ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ:12164–12166/2016ರ ದಿನಾಂಕ:31.03.2017ರಲ್ಲಿ ಆದೇಶಿಸಿದಂತೆ 20,000ಕ್ಕಿಂತ ಹೆಚ್ಚಿನ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 500 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ/ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಅಂತರದಲ್ಲಿ ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ. 20,000ಕ್ಕಿಂತ ಕಡಿಮೆ ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 220 ಮೀಟರ್ (ಸರ್ವೀಸ್ ರಸ್ತೆಯು ಹಾದು ಹೋಗಿದ್ದಲ್ಲಿ ಸರ್ವೀಸ್ ರಸ್ತೆಯ ಅಂಚಿನಿಂದ ಅಥವಾ ರಾಜ್ಯ / ರಾಷ್ಟ್ರೀಯ ಹೆದ್ದಾರಿಯ ಅಂಚಿನಿಂದ) ಅಂತರದಲ್ಲಿ ಯಾವುದೇ ಸನ್ನದನ್ನು ಮಂಜೂರು ಮಾಡುವಂತಿಲ್ಲ.<br><br>ಮಾನ್ಯ ಸರ್ವೋಚ್ಛ ನ್ಯಾಯಾಲಯದ ಎಸ್.ಎಲ್.ಪಿ (ಸಿವಿಲ್) ಸಂಖ್ಯೆ:10243/2017ರಲ್ಲಿನ ದಿನಾಂಕ:11.07.2017ರ ಆದೇಶದಲ್ಲಿ ನೀಡಿದ ಸ್ಪಷ್ಟೀಕರಣದಂತೆ, ಮಹಾನಗರ ಪಾಲಿಕೆ, ನಗರ ಪಾಲಿಕೆ, ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹಾದು ಹೋಗುವ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿರುವ ಸನ್ನದುಗಳನ್ನು ನಿಯಮಾನುಸಾರ ನವೀಕರಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 36 ಇಡಬ್ಲ್ಯೂಪಿ 2018, ದಿನಾಂಕ: 06.08.2020ರಲ್ಲಿ 2011ರ ಜನಗಣತಿಯನ್ವಯ 5000 ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆಯುಳ್ಳ ಗ್ರಾಮ ಪಂಚಾಯಿತಿ/ಸ್ಥಳೀಯ ಪ್ರದೇಶಗಳ ವ್ಯಾಪ್ತಿಯಲ್ಲಿ ಹಾದು ಹೋಗುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಹೊಸದಾಗಿ ಸಿಎಲ್–6ಎ ಮತ್ತು ಸಿಎಲ್–7 ಸನ್ನದುಗಳಿಗೆ ಮಾತ್ರ ಕರ್ನಾಟಕ ಅಬಕಾರಿ (ಸನ್ನದುಗಳ ಸಾಮಾನ್ಯ ಷರತ್ತುಗಳು) ನಿಯಮಗಳು, 1967ರ ನಿಯಮ (5)ರಡಿಯಲ್ಲಿ ರಾಜ್ಯ ಮತ್ತು ರಾಷ್ಟ್ರೀಯ |

| | | |
|---|---|---|
| | | ಹೆದ್ದಾರಿಗಳಿಗೆ ಸಂಬಂಧಿಸಿದಂತೆ ವಿಧಿಸಿರುವ ನಿಬಂಧನೆಗಳನ್ನು, ಹೊರತುಪಡಿಸಿ, ಇತರೆ ಷರತ್ತುಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ನಿಯಮಾನುಸಾರ ಪ್ರಾರಂಭಿಸಲು ವಿನಾಯಿತಿಯನ್ನು ನೀಡಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ:ಆಇ 33 ಇಎಫ್‌ಎಲ್ 2021, ದಿನಾಂಕ:19.01.2022ರಲ್ಲಿ ಸರ್ಕಾರದ ರಾಜಸ್ವ ಹಿತದೃಷ್ಟಿಯಿಂದ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಹೊಸದಾಗಿ ಮಂಜೂರು ಮಾಡುವ ಸಿಎಲ್–7(ಎ) ಸನ್ನದುಗಳಿಗೆ (ಸರ್ಕಾರದ ಸಂಸ್ಥೆಗಳಾದ ಐ.ಟಿ.ಡಿ.ಸಿ ಮತ್ತು ಕೆ.ಎಸ್.ಡಿ.ಟಿ.ಸಿ) ಅನುಮತಿಯನ್ನು ನೀಡಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆಇ 07 ಇಎಫ್‌ಎಲ್ 2008, ದಿನಾಂಕ: 03.07.2009 ರಲ್ಲಿ ರಾಜ್ಯದ ಪ್ರತಿ ತಾಲ್ಲೂಕಿಗೆ ಕನಿಷ್ಟ 2 ಸನ್ನದುಗಳಂತೆ 352 ಸನ್ನದುಗಳು, ಜಿಲ್ಲಾ ಕೇಂದ್ರಸ್ಥಾನಕ್ಕೆ 2 ರಂತೆ 58 ಸನ್ನದುಗಳು ಹಾಗೂ ಎಂಎಸ್‌ಐಎಲ್ ಸಂಸ್ಥೆ ಪ್ರಾದೇಶಿಕ ಬೇಡಿಕೆ ಅಧ್ಯಯನ ಆಧರಿಸಿ ಕೋರಿಕೆ ಸಲ್ಲಿಸುವ ಸ್ಥಳಗಳಿಗೆ 53 ಸನ್ನದುಗಳಂತೆ ಒಟ್ಟು 463 ಸನ್ನದುಗಳನ್ನು ಹಂಚಿಕೆ ಮಾಡಲಾಗಿದೆ.<br><br>ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಆಇ 15 ಇಎಫ್‌ಎಲ್ 2015, ದಿ:23.09.2016 ರಲ್ಲಿ ರಾಜ್ಯದ 220 ವಿಧಾನ ಸಭಾ ಕ್ಷೇತ್ರಗಳಿಗೆ ಪ್ರತಿ ಕ್ಷೇತ್ರಕ್ಕೆ 4 ಸನ್ನದುಗಳಂತೆ ಒಟ್ಟು 880, ಯಾದಗಿರಿ ಜಿಲ್ಲೆಯ ನಾಲ್ಕು ವಿಧಾನ ಸಭಾ ಕ್ಷೇತ್ರಗಳಿಗೆ ತಲಾ 5 ರಂತೆ ಒಟ್ಟು 20, ಹೀಗೆ ರಾಜ್ಯದಲ್ಲಿ ಒಟ್ಟಾರೆ 900 ಸಿಎಲ್ 11–ಸಿ ಸನ್ನದುಗಳನ್ನು ಎಂ.ಎಸ್.ಐ.ಎಲ್ ಸಂಸ್ಥೆಗೆ ಮಂಜೂರಾತಿ ನೀಡಲು ಸರ್ಕಾರವು ಅನುಮತಿ ನೀಡಿರುತ್ತದೆ. |

**ಆಇ 32 ಇಎಲ್‌ಕ್ಯೂ 2024**

(ಆರ್.ಬಿ.ತಿಮ್ಮಾಪುರ)

ಅಬಕಾರಿ ಸಚಿವರು